ಮೈಸೂರ ಗೆಜಿಟ.

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ ಮೇ ತಾ॥ 3, ಸ್ಯ 1890.

☞ ಈ ಭಾಗವನ್ನು ಪ್ರತ್ಯೇಕ ಕೇರಿಸಿ ಇಡುವ ಬಗ್ಯೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

೨ನೇ ಭಾಗ.

ಇಂಡ್ಯಗವರ್ಮೆಂಟ್, ರೆಸಿಡೆಂಟರು, ಜೇಫ್ ಜಡ್ಜ್ಗರು, ವಗ್ಯೆರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫೈನ್ಯಾನ್ಷಿಯಲ್ ಇಲಾಖಾ.

ಇಸವಿಯ ಮೈಸೂರು ರೆಯಿಲ್‌ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಯೆ ಘರಾ[illegible]ರೆಯಲ್ಪಡಬಹುದಾದಂಥಾ ಸದರೀ ಸಾಲದ ಡಿಬೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಣದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಅಂಡ್‌ಕೋಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಯೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಯೇರ್ಪಾಡು ಮಾಡಿಕೊಂಡಿರುವದಾಗಿಯೂ ಲಂಡನ್ನಲ್ಲಿ ತಮ್ಮ ಡಿಬೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿಬೆಂಚರ್‌ಗಳನ್ನು ಎಕ್ಸ್‌ಚೇಸ್‌ಮೆಂಟ್ ಯಾ[illegible]ಪರಾ ಬಗ್ಯೆ ಇದರಡಿ ರುಜಾ ಮಾಡಿರುವವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡಿಯು, ಮದ್ರಾಸಿನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿಮಾಂಡ್ ಡ್ರಾಫ್‌ಟ್ಸ್ ಯಿಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಕ್ಸ್‌ಚೇಸ್‌ಮೆಂಟ್ ಬಗ್ಯೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸರ್ನ್,
ಕಾಂಪ್ಟ್ರೋಲರ್.

ಮೈಸೂರು ರೆವಿನ್ಯೂ ಸರ್ವೆ ಮತ್ತು ಸೆಟಿಲ್‌ಮೆಂಟ್ ಇಲಾಖಾ.

ಇಸ್ತಿಹಾರ್‌ನಾಮೆ.

ನಂಬರ್ 152. ತಾರೀಖು 17ನೇ ಏಪ್ರೆಲ್ ಸ್ಯ 1890ನೇ ಇಸವಿ.

ಸಕಲ ಜನಗಳಿಗೂ ತಿಳಿಯುವದಕ್ಕೋಸ್ಕರ ಇದರಿಂದ ಪ್ರಕಟಿಸಲ್ಪಡುವದೇನಂದರೆ,—ಕೋಲಾರ ಡಿಸ್ಟ್ರಿಕ್ಟ್‌ಗೆ ಸೇರಿದ ಮಾಲೂರು ತಾಲ್ಲೂಕಿನ ರೆವಿನ್ಯೂ ಸರ್ವೆಸೆಟಿಲ್‌ಮೆಂಟ್ ಯಾನೆ ತರವು ಜಮಾಬಂದಿ ಕೆಲಸವು ಸ್ಯ 1890ನೇ ಇಸವಿ ಮೇ 5ನೇ ತಾರೀಖಿನಲ್ಲಿ ಯಾ ಆ ಪುಮಾರಿಗೆ ಪ್ರಾರಂಭಿಸಲ್ಪಡುತ್ತೆ.

ಜೆ. ರತರ್‌ಫರ್ಡ್, ಕರ್ನಲ್.
ಡೆಪ್ಯುಟಿ ಸೂಪರಿಂಟೆಂಡೆಂಡ್ ರೆವಿನ್ಯೂ ಸರ್ವೆ.